ದಿನಾಂಕ 10-10-2022 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ : 2 ರಿಂದ 7 ನೇ ಪ್ರತಿವಾದಿಗಳ ಪರ ಶ್ರೀ ಸಿ.ಎಂ.ಹೆಚ್ ವಕೀಲರಿಂದಃ**

ನಾನು ನನ್ನ ಮುಖ್ಯ ವಿಚಾರಣೆಯ ಬದಲಾಗಿ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿರುವ ಸಂಗತಿಗಳನ್ನು ನಾನೇ ವಕೀಲರಿಗೆ ಹೇಳಿ ಬರೆಸಿರುತ್ತೇನೆ. ಅದರಲ್ಲಿರುವ ಸಂಗತಿಗಳು ಸತ್ಯದಿಂದ ಕೂಡಿದ್ದು, ಪ್ರಮಾಣ ಪತ್ರದಲ್ಲಿರುವ ಸಹಿಗಳು ನನ್ನದೇ ಆಗಿರುತ್ತವೆ.

ದಿಃ 12-07-2022 ರ ಒಟ್ಟು ಮುಕ್ತಿಯಾರ ಪತ್ರವನ್ನು ಹಾಜರುಪಡಿಸಿದ್ದು, ಅದನ್ನು ನಿ.ಡಿ-1 ಎಂದು, ಡ ಸಂಃ 2391 ರ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ಅದನ್ನು ನಿ.ಡಿ-2 ಎಂದು, ಸ ನಂಃ 92/2 ಕ ಜಮೀನಿನ 1988-89 ರಿಂದ 2000-01 ನೇ ಸಾಲಿನ ಎರಡು ಕೈ ಬರವಣಿಗೆಯ ದೃಢೀಕೃತ ಪಹಣಿ ಪತ್ರಿಕೆಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿ.ಡಿ-3 ಮತ್ತು 4 ಎಂದು, ಆಸ್ತಿ ಸಂಃ 199 ರ ಕರ ನಿರ್ಧರಣಾ ಪಟ್ಟಿಯ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ಅದನ್ನು ನಿ.ಡಿ-5 ಎಂದು, ದಿಃ 26-02-2014 ರ ಠರಾವಿನ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ಅದನ್ನು ನಿ.ಡಿ-6 ಎಂದು, ದಿಃ 20-10-2012 ರ ಠರಾವಿನ ದೃಢೀಕೃತ ನಕಲನ್ನು ಹಾಜರು ಪಡಿಸಿದ್ದು, ಅದನ್ನು ನಿ.ಡಿ-7 ಎಂದು, ಆಸ್ತಿ ಸಂಃ 125 ರ ಕರ ನಿರ್ಧರಣಾ ಪಟ್ಟಿಯ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ಅದನ್ನು ನಿ.ಡಿ-8 ಎಂದು, ದಿಃ 18-03-2013 ರ ಸ್ವೀಕೃತಿ ಅರ್ಜಿಯ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ಅದನ್ನು ನಿ.ಡಿ-9 ಎಂದು, ದಿಃ 20-10-2012 ವಿಶೇಷ ಸಭೆಯ ಠರಾವಿನ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ಅದನ್ನು ನಿ.ಡಿ-10 ಎಂದು ಮತ್ತು ಆಸ್ತಿ ಸಂಃ 143 ರ ಕರ ನಿರ್ಧರಣಾ ಪಟ್ಟಿಯ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ಅದನ್ನು ನಿ.ಡಿ-11 ಎಂದು ಗುರುತಿಸಲಾಯಿತು.

**<u>ಪಾಟೀ ಸವಾಲುಃ ವಾದಿಯ ಪರ ಶ್ರೀ  ಬಿ.ಎಸ್.ಎ  ವಕೀಲರಿಂದಃ</u>**

ಪಾಟೀ ಸವಾಲಿಗೆ ಸಮಯ ಕೋರಿರುತ್ತಾರೆ. ನ್ಯಾಯ ಮತ್ತು ಸಮ್ಮತತೆ ಆಧಾರದ ಮೇರೆಗೆ ಪಾಟೀ ಸವಾಲನ್ನು ಮುಂದೂಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ. ಹೇ. ಕೆ ಸರಿ ಇದೆ   ಎಂದು
ಒಪ್ಪಿರುತ್ತಾರೆ.

**Sd/-**

ದಿವಾಣಿ ನ್ಯಾಯಾಧೀಶರು ಮತ್ತು ಜೆ ಎಂ ಎಫ್ ಸಿ
ಹಾನಗಲ್ಲ.

ಸಾಕ್ಷಿದಾರರ ಸಹಿ